1022 (1095) ಶ್ರೀ ಮೋಹನ್‌ಕೃಷ್ಣ ಶೆಟ್ಟಿ (ಕುಮಟಾ) ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕುಮಟಾ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸರ್ಕಾರಿ ಕಲಾ, ವಾಣಿಜ್ಯ, ವಿಜ್ಞಾನ ಪದವಿ ಶಿಕ್ಷಣ ಕಾಲೇಜನ್ನು ಸ್ಥಾಪಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೆ,

ಆ) ಬಡವರು, ಮಧ್ಯಮ ವರ್ಗದವರು ಖಾಸಗಿ ಕಾಲೇಜಿನ ದುಬಾರಿ ಶಿಕ್ಷಣದ ಕಾರಣ ಪದವಿ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಕುಮಟಾದಲ್ಲಿ ಸರ್ಕಾರ ಕಲಾ, ವಾಣಿಜ್ಯ, ವಿಜ್ಞಾನ ಪದವಿ ಕಾಲೇಜು ಪ್ರಾರಂಭಿಸಲು ಏನು ಕ್ರಮ ಕೈಗೊಳ್ಳಲಾಗಿದೆ,

ಈ) ಯಾವಾಗ ಸರ್ಕಾರಿ ಪದವಿ ಕಾಲೇಜನ್ನು ಪ್ರಾರಂಭಿಸಲಾಗುವುದು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಇಲ್ಲಾ

ಇ) 2007–08ನೇ ಸಾಲಿನಿಂದ ಕುಮಟಾದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಪರಿಶೀಲಿಸಲಾಗುತ್ತಿದೆ

ಈ) ಮೇಲಿನಂತೆ

1023 (1230) ಶ್ರೀ ಮುನಿಯಪ್ಪ ಎಸ್ ಎಂ (ಚಿಕ್ಕಬಳ್ಳಾಪುರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಚಿಕ್ಕಬಳ್ಳಾಪುರ ನಗರ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಬಾಲಕ,ಬಾಲಕಿಯರಿಗೆ ಪ್ರತ್ಯೇಕ ವಿಭಾಗಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಪದವಿ ಪೂರ್ವ ಕಾಲೇಜು ವಿಭಾಗದಲ್ಲಿ ಪ್ರತ್ಯೇಕ ಬಾಲಕಿಯರ [illegible] ಸರ್ಕಾರದ ಗಮನಕ್ಕೆ ಬಂದಿದೆಯೇ,